# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 2038 |
| ಸದಸ್ಯರ ಹೆಸರು | : ಶ್ರೀ ಹೆಚ್.ಎಂ. ರಮೇಶಗೌಡ |
| ಉತ್ತರಿಸುವ ದಿನಾಂಕ | : 24.03.2021 |
| ಉತ್ತರಿಸುವ ಸಚಿವರು | : ಕಂದಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ನೀಡಲು ಯಾವ ಕಾಯ್ದೆಯಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ; (ಕಾಯ್ದೆಯ ಸಂಪೂರ್ಣ ವಿವರ ನೀಡುವುದು) | ಸರ್ಕಾರಿ ಜಮೀನುಗಳನ್ನು ಸರ್ಕಾರಿ ಉದ್ದೇಶಗಳಿಗಾಗಿ ಬಳಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 71 ರಡಿ ಕಾಯ್ದಿರಿಸಲು ಹಾಗೂ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮಗಳಡಿ ಮಂಜೂರಾತಿ ಮಾಡಲು ಅವಕಾಶವನ್ನು ಕಲ್ಪಿಸಲಾಗಿದೆ. |
| ಆ) | ಕರ್ನಾಟಕ ಭೂ ಕಂದಾಯ ಅಧಿನಿಯಮದಡಿ ಕೆಲವು ತುರ್ತು ಸಂದರ್ಭಗಳಲ್ಲಿ ಸರ್ಕಾರಿ ಭೂಮಿಯನ್ನು ಮಂಜೂರಾತಿ ಮಾಡಲು ಜಿಲ್ಲಾಧಿಕಾರಿಯವರಿಗೆ ಅವಕಾಶ ಕಲ್ಪಿಸಲಾಗಿದೆಯೇ; (ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 70 ಎಲ್‌ಜಿಪಿ 2008; ದಿನಾಂಕ: 08.08.2008 ರ ಸುತ್ತೋಲೆಯಲ್ಲಿ ಸಾರ್ವಜನಿಕ ಹಾಗೂ ಸರ್ಕಾರಿ ಉದ್ದೇಶಗಳಿಗಾಗಿ 4 ಹೆಕ್ಟೇರ್ (9-36 ಎ/ಗುಂ) ವರೆಗೆ ಭೂಮಿಯನ್ನು ಮಂಜೂರಾತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಅವಕಾಶವನ್ನು ಕಲ್ಪಿಸಲಾಗಿದೆ. (ಪ್ರತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ). |
| ಇ) | ಸರ್ಕಾರಿ ಶಾಲೆಗಳು, ಸರ್ಕಾರಿ ವಸತಿ ಶಾಲೆಗಳು ಹಾಗೂ ಇತರೆ ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ಮಾಡಲು ಇರುವಂತಹ ಮಾನದಂಡಗಳೇನು? (ವಿವರ ನೀಡುವುದು) | ಸರ್ಕಾರಿ ಶಾಲೆಗಳು, ಸರ್ಕಾರಿ ವಸತಿ ಶಾಲೆಗಳು ಹಾಗೂ ಇತರೆ ಸರ್ಕಾರಿ ಉದ್ದೇಶಗಳಿಗೆ ಸಂಬಂಧಪಟ್ಟ ಇಲಾಖೆಗಳಿಂದ ಮನವಿಗಳು ಸ್ವೀಕೃತವಾದಲ್ಲಿ ಇಲಾಖೆಗೆ ಅಗತ್ಯವಿರುವ ವಿಸ್ತೀರ್ಣವನ್ನು ಖಚಿತಪಡಿಸಿಕೊಂಡು ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ರ ಕಲಂ 71 ರಡಿ ಕಾಯ್ದಿರಿಸಲು ಹಾಗೂ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮಗಳಡಿ ಮಂಜೂರಾತಿ ಮಾಡಲು ಅವಕಾಶವನ್ನು ಕಲ್ಪಿಸಲಾಗಿದೆ. |

**ಸಂಖ್ಯೆ: ಆರ್‌ಡಿ 89 ಎಲ್‌ಜಿಕ್ಯೂ 2021**

**(ಆರ್ .ಅಶೋಕ)**
**ಕಂದಾಯ ಸಚಿವರು.**